# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

14

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ನಅಇ 19 ಮೈಅಪ್ರಾ 2007 ದಿನಾಂಕ: 14.02.2007.

(2) ಬಂಟ್ವಾಳ ಪುರಸಭಾ ಕಾರ್ಯಾಲಯದ ಪತ್ರ ಸಂಖ್ಯೆ: ಪು.ಯೋ.ಪ್ರಾ/ಬಂ.ಮ.ಯೋ.2.ಸಿ.ಆರ್.50/2008–09 ದಿನಾಂಕ 05.03.2009.

(3) ನಗರ ಯೋಜನಾ ನಿರ್ದೇಶಕರ ಕಛೇರಿಯ ಕಡತ ಸಂಖ್ಯೆ: ನಯೋ(17)/ಬಂಟ್ವಾಳ/ಮ.ಯೋ.ಅಂ/2068/2009 ರಲ್ಲಿ ನಗರ ಯೋಜನಾ ನಿರ್ದೇಶಕರು ನೀಡಿರುವ ಅಭಿಪ್ರಾಯ ದಿನಾಂಕ: 26.03.2009.

–*–*–

**ಪ್ರಸ್ತಾವನೆ:–**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಬಂಟ್ವಾಳ ಪುರಸಭೆ ಕಾರ್ಯಾಲಯವು ಬಂಟ್ವಾಳ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(3) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ಇಲಾಖೆ ಮುಖಾಂತರ ಸಲ್ಲಿಸಲಾಗಿದೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಡತದಲ್ಲಿ ಬಂಟ್ವಾಳ ಪಟ್ಟಣದ ಜನಸಂಖ್ಯೆಯು 2021ರಲ್ಲಿ 48,000ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಬಂಟ್ವಾಳ ಸ್ಥಳೀಯ ಯೋಜನಾ ಪ್ರದೇಶದ 2814 ಹೆಕ್ಟೇರ್‌ಗಳಲ್ಲಿ 1199.44 ಹೆಕ್ಟೇರ್‌ಗಳನ್ನು ಅಭಿವೃದ್ಧಿಗಾಗಿ ಬೇಕಾಗುವ ಪ್ರದೇಶವೆಂದು ತೀರ್ಮಾನಿಸಿ ಮಹಾ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 1199.44 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 740.99 ಹೆಕ್ಟೇರ್ (ಶೇ.61.79), ವಾಣಿಜ್ಯಕ್ಕಾಗಿ 43.21 ಹೆಕ್ಟೇರ್ (ಶೇ.3.60), ಕೈಗಾರಿಕೆಗಾಗಿ 11.79 ಹೆಕ್ಟೇರ್ (ಶೇ.0.98), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕಾಗಿ 30.24 ಹೆಕ್ಟೇರ್ (ಶೇ.2.52), ನಾಗರೀಕ ಸೌಲಭ್ಯಕ್ಕಾಗಿ 3.25 ಹೆಕ್ಟೇರ್ (ಶೇ.0.27), ಉದ್ಯಾನವನ/ಬಯಲು ಜಾಗೆಗಾಗಿ 43.33 ಹೆಕ್ಟೇರ್ (ಶೇ.3.61), ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 326.63 ಹೆಕ್ಟೇರ್ (ಶೇ.27.23) ಪ್ರದೇಶವನ್ನು ನಿಗಧಿಪಡಿಸಿ, ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು

...2)

ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ಈ ವಿಷಯವನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 214 ಮೈಅಪ್ರಾ 2009, ಬೆಂಗಳೂರು, ದಿನಾಂಕ: 13.07.2009**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ ಸದರಿ ಪ್ರಕಟಿತ 100 ಪ್ರತಿಗಳನ್ನು ಈ ಇಲಾಖೆಗೆ ಒದಗಿಸುವಂತೆ ಕೋರಲಾಗಿದೆ.

ಪ್ರತಿಯನ್ನು:
1. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2. ಮುಖ್ಯಾಧಿಕಾರಿಗಳು, ಪುರಸಭೆ ಕಾರ್ಯಾಲಯ, ಬಂಟ್ವಾಳ.
3. ನಗರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಮೈಸೂರು.
4. ನಗರ ಯೋಜನಾ ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಮಂಗಳೂರು.
5. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.